ಕರ್ನಾಟಕ ವಿಧಾನ ಪರಿಷತ್ತು

ಸದಸ್ಯರ ಹೆಸರು : ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ : 448
ಉತ್ತರ ದಿನಾಂಕ : 06.03.2020

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಬೀದರ ಜಿಲ್ಲೆಯಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳ ಸ್ಥಾಪನೆಗೆ ಎಷ್ಟು ಅನುದಾನ ನೀಡಲಾಗಿದೆ; (ತಾಲ್ಲೂಕುವಾರು ವಿವರ ನೀಡುವುದು)</td><td>ಬೀದರ ಜಿಲ್ಲೆಯಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳ ಸ್ಥಾಪನೆಗೆ ನೀಡಿರುವ ಅನುದಾನದ ವಿವರಗಳು ಕೆಳಕಂಡಂತಿದೆ.
<table>
<tr><th>ಕ್ರಮ ಸಂಖ್ಯೆ</th><th>ತಾಲ್ಲೂಕು</th><th>ಅನುದಾನ (ರೂ. ಲಕ್ಷಗಳಲ್ಲಿ)</th></tr>
<tr><td>1</td><td>ಔರಾದ(ಬಿ)</td><td>832.00</td></tr>
<tr><td>2</td><td>ಬಸವಕಲ್ಯಾಣ</td><td>388.00</td></tr>
<tr><td>3</td><td>ಹುಮನಾಬಾದ</td><td>330.00</td></tr>
<tr><td>4</td><td>ಭಾಲ್ಕಿ</td><td>600.00</td></tr>
<tr><td>5</td><td>ಬೀದರ</td><td>592.00</td></tr>
<tr><td colspan="2">ಒಟ್ಟು</td><td>2742.00</td></tr>
</table></td></tr>
<tr><td>ಆ)</td><td>ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪನೆ ಮಾಡಿದರೂ ಜನ ಸಾಮಾನ್ಯರಿಗೆ ಕುಡಿಯುವ ನೀರಿನ ಸೌಲಭ್ಯ ಸಿಗುತ್ತಿಲ್ಲವೇಕೆ;</td><td>ಅಂತರ್ಜಲವು ಕಲುಷಿತವಾಗಿರುವ ಜನವಸತಿಗಳಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪಿಸಲಾಗಿದ್ದು, ಜನ ಸಾಮಾನ್ಯರಿಗೆ ಕುಡಿಯುವ ನೀರಿನ ಸೌಲಭ್ಯ ಸಿಗುತ್ತಿದೆ.</td></tr>
<tr><td>ಇ)</td><td>ಶುದ್ದ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪಿಸಿದ ಕೆಲವು ದಿನಗಳಲ್ಲೇ ಜಿಲ್ಲೆಯಲ್ಲಿ ನೀರಿನ ಘಟಕಗಳು ಕೆಟ್ಟು ಹೋಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ ಇದಕ್ಕೆ ಕಾರಣಗಳೇನು?</td><td>ಶುದ್ಧ ಕುಡಿಯುವ ನೀರಿನ ಘಟಕಗಳಲ್ಲಿ ಸಾಧಾರಣ ಸಮಸ್ಯೆಗಳಾದ ಕಚ್ಚಾ ನೀರಿನ ಸಮಸ್ಯೆ, ವಿದ್ಯುತ್ ಸಮಸ್ಯೆ, ಫಿಲ್ಟರ್ ಸಮಸ್ಯೆಗಳು ಮತ್ತು ಏಜೆನ್ಸಿ/ಗುತ್ತಿಗೆದಾರರು ಸರಿಯಾಗಿ ನಿರ್ವಹಣೆ ಮಾಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಅವುಗಳನ್ನು ಕಾಲಕಾಲಕ್ಕೆ ಸರಿಪಡಿಸಿ ನೀರನ್ನು ಸರಬರಾಜು ಮಾಡಲು ಕ್ರಮವಹಿಸಲಾಗುತ್ತಿದೆ.</td></tr>
</table>

ಸಂ:ಗ್ರಾಕುನೀ&ನೈಇ 41 ಗ್ರಾನೀಸ(5)20

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು